## ನಿಮ್ಮೊಡನೆ

ಶಿಕ್ಷಣ ಹಕ್ಕು ಕಾಯಿದೆ ಜಾರಿಗೆ ತರಲು ರಾಜ್ಯ ಸರ್ಕಾರಕ್ಕೆ ಆಸಕ್ತಿ ಏಕಿಲ್ಲ? ಶಿಕ್ಷಣ ಹಕ್ಕು ಕಾಯಿದೆ ಜಾರಿಗೆ ಬಂದರೆ 6 ರಿಂದ 14 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಉಚಿತ ಶಿಕ್ಷಣ ಪಡೆಯುವ ಹಕ್ಕು ಸಿಗುತ್ತದೆ.

# ಕನ್ನಡದ ಕತ್ತು ಹಿಸುಕಬೇಡಿ

ದೇಶದ ಪ್ರತಿಯೊಬ್ಬ ಪ್ರಜೆಗೂ ಶಿಕ್ಷಣ ಪಡೆಯುವ ಅವಕಾಶ ಇರಬೇಕು ಎಂಬುದು ನಮ್ಮ ಸಂವಿಧಾನದ ಆಶಯ. ಪ್ರಜಾಪ್ರಭುತ್ವ ವ್ಯವಸ್ಥೆ ಯಶಸ್ವಿಯಾಗಬೇಕಾದರೆ ದೇಶದ ಪ್ರಜೆಗಳು ಸಾಕ್ಷರರಾಗಿರಬೇಕು. ಈ ಹಿನ್ನೆಲೆಯಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುತ್ತ ಬಂದಿವೆ. ದೇಶದ ಉದ್ದಗಲದಲ್ಲಿ ಲಕ್ಷಾಂತರ ಶಾಲಾ, ಕಾಲೇಜುಗಳಲ್ಲಿ ಕೋಟ್ಯಂತರ ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಶಿಕ್ಷಣ ವಂಚಿತರನ್ನು ಸಾಕ್ಷರರನ್ನಾಗಿಸಲು ಹಲವು ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ. ಆದರೂ ಇನ್ನೂ ಅನಕ್ಷಸ್ಥರಿದ್ದಾರೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ 'ಶಿಕ್ಷಣ ಹಕ್ಕು' (ಆರ್ ಟಿಇ) ಕಾಯಿದೆಯನ್ನು 2009ರಲ್ಲಿ ಜಾರಿಗೆ ತಂದಿದೆ. ಆದರೆ ಈ ಕಾಯಿದೆಯನ್ನು ಅನುಷ್ಠಾನಗೊಳಿಸುವ ವಿಷಯದಲ್ಲಿ ಕರ್ನಾಟಕ ಸೇರಿದಂತೆ ಹಲವು ರಾಜ್ಯ ಸರ್ಕಾರಗಳು ಆಸಕ್ತಿ ತೋರಿಸುತ್ತಿಲ್ಲ ಎಂದು ಕೇಂದ್ರ ಮಾನವ ಸಂಪನ್ಮೂಲ ಸಚಿವರು ಕಳವಳ ವ್ಯಕ್ತಪಡಿಸಿದ್ದಾರೆ. ಈ ಬೆಳವಣಿಗೆ ನಿಜಕ್ಕೂ ದುರದೃಷ್ಟಕರ.

ಶಿಕ್ಷಣ ಹಕ್ಕು ಕಾಯಿದೆ ಜಾರಿಗೆ ತರಲು ರಾಜ್ಯ ಸರ್ಕಾರಕ್ಕೆ ಆಸಕ್ತಿ ಏಕಿಲ್ಲ? ಶಿಕ್ಷಣ ಹಕ್ಕು ಕಾಯಿದೆ ಜಾರಿಗೆ ಬಂದರೆ 6 ರಿಂದ 14 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಉಚಿತ ಶಿಕ್ಷಣ ಪಡೆಯುವ ಹಕ್ಕು ಸಿಗುತ್ತದೆ. ಇದು ಅತ್ಯಂತ ದೂರದೃಷ್ಟಿ ಉಳ್ಳ ಜನಪರ ಯೋಜನೆ ಎಂಬುದು ಮೇಲುನೋಟಕ್ಕೆ ಗೊತ್ತಾಗುತ್ತದೆ. ನಮ್ಮ ರಾಜ್ಯದ ಎಲ್ಲಾ ಮಕ್ಕಳಿಗೂ ಪ್ರಾಥಮಿಕ ಶಿಕ್ಷಣವೂ ಸಿಗದೇ ಇರಲು ಅವರ ಬಡತನ ಅಡ್ಡಿಯಾಗಿದೆ. ಬಡ ಕುಟುಂಬಗಳಿಗೆ ಜೀವನ ನಿರ್ವಹಣೆಯೇ ದೊಡ್ಡ ಸಮಸ್ಯೆ. ಇಂಥ ಪರಿಸ್ಥಿತಿಯಲ್ಲಿ ಮಕ್ಕಳನ್ನು ಸರ್ಕಾರಿ ಶಾಲೆಗೆ ಕಳಿಸಿ ಶಿಕ್ಷಣ ಕೊಡಿಸುವುದೂ ಅನೇಕ ಕುಟುಂಬಗಳಿಗೆ ಸಾಧ್ಯವಾಗುತ್ತಿಲ್ಲ. ಶಿಕ್ಷಣ ಹಕ್ಕು ಯೋಜನೆ ಜಾರಿಗೆ ಬಂದರೆ ಹೊಸ ಶಾಲೆಗಳನ್ನು ತೆರೆಯಲು ಕೇಂದ್ರ ಸರ್ಕಾರವೇ ಹಣಕಾಸಿನ ನೆರವು ನೀಡುತ್ತದೆ. ಈ ನೆರವನ್ನು ಬಳಸಿಕೊಂಡು ಗ್ರಾಮೀಣ ಪ್ರದೇಶದಲ್ಲಿ ಹೊಸ ಶಾಲೆಗಳನ್ನು ತೆರೆದು ಲಕ್ಷಾಂತರ ಮಕ್ಕಳಿಗೆ ಉಚಿತ ಶಿಕ್ಷಣ ಕೊಡಲು ಸಾಧ್ಯವಿದೆ. ಆದರೆ ರಾಜ್ಯ ಸರ್ಕಾರಕ್ಕೆ ಈ ಯೋಜನೆಯ ಆಶಯ ಅರ್ಥವಾಗುತ್ತಿಲ್ಲ. ಅಥವಾ ಸರ್ಕಾರದ ನಿರಾಸಕ್ತಿಗೆ ಬೇರೆ ಕಾರಣ ಇರಬಹುದೇ?

ಕೇಂದ್ರ ಸರ್ಕಾರದ 'ಸರ್ವ ಶಿಕ್ಷಣ ಅಭಿಯಾನ' ಯೋಜನೆಗೆ ನೀಡುತ್ತಿರುವ ನೆರವನ್ನು ಬಳಸಿಕೊಳ್ಳುವ ವಿಷಯದಲ್ಲೂ ರಾಜ್ಯ ಸರ್ಕಾರ ಹಿಂದೆ ಬಿದ್ದಿದೆ. ಇರುವ ಸರ್ಕಾರಿ ಶಾಲೆಗಳನ್ನೇ ಮುಚ್ಚಲು ಹೊರಟಿದೆ. ಇದುವರೆಗೆ ರಾಜ್ಯದಲ್ಲಿ ಹತ್ತು ಸಾವಿರ ಸರ್ಕಾರಿ ಶಾಲೆಗಳು ಮುಚ್ಚಿವೆ. ಪ್ರಸ್ತುತ ಶೈಕ್ಷಣಿಕ ವರ್ಷಾಂತ್ಯದ ವೇಳೆಗೆ ಇನ್ನೂ ನೂರಾರು ಸರ್ಕಾರಿ ಶಾಲೆಗಳು ಮುಚ್ಚಲಿವೆ. ಸರ್ಕಾರಿ ಶಾಲೆಗಳಿಗೆ ವಿದ್ಯಾರ್ಥಿಗಳು ಬರುತ್ತಿಲ್ಲ ಎಂದು ಪ್ರಾಥಮಿಕ ಶಿಕ್ಷಣ ಸಚಿವರೇ ಹೇಳುತ್ತಾರೆ. ಅದಕ್ಕೆ ಏನು ಕಾರಣ ಎಂಬುದನ್ನು ಪತ್ತೆ ಹಚ್ಚಿ ಸರಿಪಡಿಸುವ ಪ್ರಯತ್ನವನ್ನೇ ಅವರು ಮಾಡುತ್ತಿಲ್ಲ. ಮುಚ್ಚುತ್ತಿರುವ ಸರ್ಕಾರಿ ಶಾಲೆಗಳೆಲ್ಲ ಕನ್ನಡ ಮಾಧ್ಯಮದ ಶಾಲೆಗಳು. ಆದರೆ ಹೊಸ ಹೊಸ ಖಾಸಗಿ ಶಾಲೆಗಳು ಆರಂಭವಾಗುತ್ತಲೇ ಇವೆ. ಕನ್ನಡ ಶಾಲೆಗಳನ್ನು ತೆರೆದು ಅಲ್ಲಿ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡಲಾಗುತ್ತಿದೆ. ಇದು ಕಾನೂನುಬಾಹಿರ. ಈ ಬೆಳವಣಿಗೆ ಸರ್ಕಾರಕ್ಕೆ ಗೊತ್ತಿದೆ. ಆದರೂ ಸರ್ಕಾರ ಈ ಕುರಿತು ಚಕಾರ ಎತ್ತದೆ ಶಿಕ್ಷಣದ ಖಾಸಗೀಕರಣಕ್ಕೆ ಪರೋಕ್ಷವಾಗಿ ಉತ್ತೇಜನ ನೀಡುತ್ತಿದೆ.

ಕರ್ನಾಟಕದಲ್ಲಿ ಕನ್ನಡಕ್ಕೆ ಮೊದಲ ಸ್ಥಾನ. ಪ್ರಾಥಮಿಕ ಶಿಕ್ಷಣದ ಮಾಧ್ಯಮ ಕನ್ನಡವೇ ಆಗಿರಬೇಕು ಎಂದು ಸರ್ಕಾರ ಹೇಳುತ್ತದೆ. ಆದರೆ ವಸ್ತುಸ್ಥಿತಿಯೇ ಬೇರೆಯೇ ಇದೆ. ಸರ್ಕಾರ ಬಹಿರಂಗವಾಗಿ ಆಡುವ ಮಾತುಗಳಿಗೂ ಅದರ ಕಾರ್ಯವೈಖರಿಗೂ ಸಂಬಂಧವೇ ಇಲ್ಲ. ಶಿಕ್ಷಣ ಹಕ್ಕು ಕಾಯಿದೆಯನ್ನು ಜಾರಿಗೊಳಿಸದೇ, ಇರುವ ಕನ್ನಡ ಸರ್ಕಾರಿ ಶಾಲೆಗಳನ್ನು ಮುಚ್ಚುವುದು ಸಾಮಾಜಿಕ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುವ ಪ್ರಯತ್ನ ಅಲ್ಲವೇ? ನಮ್ಮದು ಕನ್ನಡ ಪರ, ಬಡವರ, ಗ್ರಾಮೀಣ ಜನರ ಸರ್ಕಾರ ಎಂದು ಹೇಳಿಕೊಳ್ಳುತ್ತಲೇ ಬಡ ಮಕ್ಕಳಿಗೆ ಆಸರೆಯಾಗಿರುವ ಕನ್ನಡ ಶಾಲೆಗಳ ಕತ್ತು ಹಿಸುಕುತ್ತಿದೆ. ಅದೇನೇ ಇರಲಿ, ಕಡ್ಡಾಯ ಶಿಕ್ಷಣಕ್ಕೆ ಉತ್ತೇಜನ ನಿಡುವ ಶಿಕ್ಷಣ ಹಕ್ಕು ಕಾಯಿದೆ ರಾಜ್ಯಕ್ಕೆ ಬೇಕೇ, ಬೇಡವೇ ಎಂಬುದನ್ನು ಮುಖ್ಯಮಂತ್ರಿಯವರು ಸ್ಪಷ್ಟಪಡಿಸಬೇಕು. ಪ್ರತಿಯೊಬ್ಬರಿಗೂ ಸಮಾನ ಶಿಕ್ಷಣಾವಕಾಶಗಳು ಇರಬೇಕು ಎಂದು ರಾಜ್ಯದ ಜನ ಬಯಸುತ್ತಾರೆ. ಸರ್ಕಾರ ಅವರ ಭಾವನೆಗಳನ್ನು ಅರ್ಥ ಮಾಡಿಕೊಳ್ಳಬೇಕು.

■ ಪಿ.ಕೆ. ಹರಿಯಬ್ಬೆ

